4 ಸಿಟಿ ರೈಲ್ವೆ ನಿಲ್ದಾಣದ ಹತ್ತಿರ ರೈಲ್ವೆ ಕೆಳ ಸೇತುವೆ ನಿರ್ಮಾಣದ ಕಾಮಗಾರಿಗೆ ಜನರಲ್ ಅಲೈನ್‌ಮೆಂಟ್ ಡ್ರಾಯಿಂಗ್ ತಯಾರಿಸಲಾಗಿದೆ

5 ಲಿಂಗರಾಜಪುರ ಆರ್ ಓ ಬಿ ಕಾಮಗಾರಿ ಪ್ರಗತಿಯಲ್ಲಿರುತ್ತದೆ

6 ಇಂಡಿಯನ್ ಆಯಿಲ್ ಬ್ರಿಡ್ಜ್ ಹತ್ತಿರ ರೈಲ್ವೆ ಮೇಲು ಸೇತುವೆ ಕಾಮಗಾರಿ ಪ್ರಗತಿಯಲ್ಲಿರುತ್ತದೆ

7 ಐ ಟಿ ಸಿ ಕಾರ್ಖಾನೆ ಬಳಿ ರೈಲ್ವೆ ಮೇಲು ಸೇತುವೆ ಕಾಮಗಾರಿಗೆ ಜನರಲ್ ಅಲೈನ್‌ಮೆಂಟ್ ಡ್ರಾಯಿಂಗ್ ತಯಾರಿಸಲಾಗಿದೆ

8 ಬೈಯಪ್ಪನಹಳ್ಳಿ ಕಾಮಗಾರಿಗೆ ರೈಲ್ವೆ ಮೇಲು ಸೇತುವೆ ಜಿಎಡಿ ತಯಾರಿಸಲಾಗಿದೆ

9 ಗೋಕುಲ ರೈಲ್ವೆ ಮೇಲು ಸೇತುವೆ ಕಾಮಗಾರಿಗೆ ಜನರಲ್ ಅಲೈನ್‌ಮೆಂಟ್ ಡ್ರಾಯಿಂಗ್ ತಯಾರಿಸಲಾಗಿದೆ

10 ಆರ್ ಪಿ ಸಿ ಲೇಔಟ್ – ರೈಲ್ವೆ ಓವರ್ ಬ್ರಿಡ್ಜ್ ನಿರ್ಮಿಸುವ ಕಾಮಗಾರಿಯನ್ನು 2004–05 ನೇ ಸಾಲಿನ ಆಯವ್ಯಯದಲ್ಲಿ ಸೇರಿಸಿಕೊಳ್ಳಲಾಗುವುದು

ದಿನಾಂಕ 6 12 2004 ರ ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರ

ಮಲೆನಾಡು ಪ್ರದೇಶಭಿವೃದ್ಧಿ ಮಂಡಳಿಯ ವತಿಯಿಂದ ಬಿಡುಗಡೆ ಮಾಡಿರುವ ಅನುದಾನದ ಬಗ್ಗೆ

1 (271) ಶ್ರೀ ಅಂಗಾರ ಎಸ್ (ಸುಳ್ಯ) ಮಾನ್ಯ ಕಾನೂನು ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗ ಉತ್ತರಿಸುವರೆ?

ಅ) ಮಲೆನಾಡು ಪ್ರದೇಶಾಭಿವೃದ್ಧಿ ವತಿಯಿಂದ ಸುಳ್ಯ ವಿಧಾನ ಸಭಾ ಕ್ಷೇತ್ರಕ್ಕೆ ಇದುವರೆಗೆ ಎಷ್ಟು ಮೊತ್ತದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ

ಆ) ಕೈಗೆತ್ತಿಕೊಂಡ ಕಾಮಗಾರಿಗಳಿಗೆ ಈವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ, ಇನ್ನೂ ಎಷ್ಟು ಹಣ ಬಿಡುಗಡೆ ಮಾಡಬೇಕಾಗಿದೆ

ಇ) ಬಾಕಿ ಇರುವ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಡಿ ಬಿ ಚಂದ್ರೇಗೌಡ (ಕಾನೂನು ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಸಚಿವರು)

ಅ) ಈವರೆಗೂ 103 80, ಲಕ್ಷ ರೂಗಳ ಮೊತ್ತದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ

ಆ) 6 48 ಲಕ್ಷ ರೂ ಗಳು
77 32 ಲಕ್ಷ ರೂ ಗಳು

ಇ) ಸಂಪನ್ಮೂಲಗಳನ್ನಾಧರಿಸಿ ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಕೈಗೆತ್ತಿಕೊಂಡಿರುವ ಕಾಮಗಾರಿಗಳ ಬಗ್ಗೆ

2 (415) ಶ್ರೀ ಅಂಗಾರ ಎಸ್ (ಸುಳ್ಯ) ಮಾನ್ಯ ಕಾನೂನು ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಅಸ್ಥಿತ್ವಕ್ಕೆ ಬಂದಾಗಿನಿಂದ ಈವರೆಗೆ ಸುಳ್ಯ ವ್ಯಾಪ್ತಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ